Akashvani : Bangalore
National Bulletin In Kannada
16.08.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

- ಇಸ್ರೋ ಭೂ ವೀಕ್ಷಣಾ ಉಪಗ್ರಹ EOS-೮ ಉಡಾವಣೆ ಯಶಸ್ವಿ; ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ
- ವೈದ್ಯರ ಮೇಲಿನ ಹಲ್ಲೆ ಸಂದರ್ಭದಲ್ಲಿ ಗರಿಷ್ಠ ಆರು ಗಂಟೆಗಳ ಒಳಗೆ ಎಫ್‌ಐಆರ್ ದಾಖಲು; ಕೇಂದ್ರ ಆರೋಗ್ಯ ಸಚಿವಾಲಯ ನಿರ್ದೇಶನ
- ಬಾಂಗ್ಲಾದೇಶದಲ್ಲಿ ಹಿಂದೂಗಳ ಭದ್ರತೆಗೆ ಬದ್ಧ; ಬಾಂಗ್ಲಾ ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರ ಪ್ರೊಫೆಸರ್ ಮುಹಮ್ಮದ್ ಯೂನಸ್ ಭರವಸೆ
- ಜಮ್ಮು-ಕಾಶ್ಮೀರದಲ್ಲಿ ಸೆಪ್ಟೆಂಬರ್ ೧೮ ರಿಂದ ಮೂರು ಹಂತಗಳಲ್ಲಿ ವಿಧಾನಸಭಾ ಚುನಾವಣೆ- ಕೇಂದ್ರ ಚುನಾವಣಾ ಆಯೋಗ
- ೨೦೨೨ನೇ ಸಾಲಿನ ರಾಷ್ಟ್ರೀಯ ಪ್ರಶಸ್ತಿ ಘೋಷಣೆ; ಕಾಂತಾರ ಅತ್ಯುತ್ತಮ ಮನೋರಂಜನಾ ಚಿತ್ರ, ಕೆಜಿಎಫ್-೨ ಅತ್ಯುತ್ತಮ ಕನ್ನಡ ಚಿತ್ರ

<><*<><>*><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ಇಂದು ಬೆಳಗ್ಗೆ ಸಣ್ಣ ಉಪಗ್ರಹ ಉಡಾವಣಾ ವಾಹಕ - ಎಸ್‌ಎಸ್‌ಎಲ್‌ವಿ ಮೂಲಕ ನಡೆಸಿದ ಭೂ ವೀಕ್ಷಣಾ ಉಪಗ್ರಹ EOS-೮ ಉಡಾವಣೆ ಯಶಸ್ವಿಯಾಗಿದೆ. ಯಶಸ್ವಿ ಉಡಾವಣೆ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಸ್ರೋ ಗೆ ಅಭಿನಂದನೆ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಭಾರತವು ಈಗ ಹೊಸ ಉಡಾವಣಾ ವಾಹನವನ್ನು ಹೊಂದಿರುವುದು ಅಪಾರ ಸಂತೋಷದ ವಿಷಯವಾಗಿದೆ. ಕಡಿಮೆ ವೆಚ್ಚದಾಯಕ ಎಸ್‌ಎಸ್‌ಎಲ್‌ವಿ ಬಾಹ್ಯಾಕಾಶ ಯಾತ್ರೆಯಲ್ಲಿ ಪ್ರಮುಖ ಪಾತ್ರ ವಹಿಸಲಿದ್ದು, ಖಾಸಗಿ ಉದ್ಯಮಕ್ಕೂ ಉತ್ತೇಜನ ನೀಡಲಿದೆ ಎಂದು ಹೇಳಿದ್ದಾರೆ. ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಬೆಳಗ್ಗೆ ೯:೧೭ಕ್ಕೆ ಉಪಗ್ರಹ ಉಡಾವಣೆ ಮಾಡಲಾಯಿತು. ೪೪ ಮೀಟರ್ ಎತ್ತರವಿರುವ PSLV ರಾಕೆಟ್‌ಗಳಿಗೆ ಹೋಲಿಸಿದರೆ, SSLV ರಾಕೆಟ್ ಚಿಕ್ಕದಾಗಿದ್ದು, ಕೇವಲ ೩೪ ಮೀಟರ್ ಎತ್ತರವಿದೆ. SSLV ರಾಕೆಟ್ ಅನ್ನು ಮಿನಿ, ಮೈಕ್ರೋ ಅಥವಾ ನ್ಯಾನೋ ಉಪಗ್ರಹಗಳನ್ನು ಕಕ್ಷೆಗೆ ಕಳುಹಿಸಲು

ಬಳಸಲಾಗುತ್ತದೆ. EOS-೮ ಯೋಜನೆಯಲ್ಲಿ ರವಾನಿಸಲಾದ ಉಪಗ್ರಹಗಳು ೧೭೫.೫ ಕೆಜಿ ತೂಕದ್ದಾಗಿವೆ. SSLV ವಾಹನಗಳ ಪ್ರಮುಖ ಲಕ್ಷಣಗಳೆಂದರೆ - ಇದು ಕಡಿಮೆ ವೆಚ್ಚ, ಕಡಿಮೆ ತಿರುಗುವ ಸಮಯ ಮತ್ತು ಬಹು ಉಪಗ್ರಹಗಳಿಗೆ ಅವಕಾಶ ಕಲ್ಪಿಸುತ್ತದೆ. ಇದಕ್ಕೆ ಕನಿಷ್ಠ ಉಡಾವಣಾ ಮೂಲಸೌಕರ್ಯ ಅಗತ್ಯವಿದೆ.

<><*<><>*><>

ವೈದ್ಯರ ಮೇಲಿನ ಹಲ್ಲೆ ಸಂದರ್ಭದಲ್ಲಿ ಗರಿಷ್ಠ ಆರು ಗಂಟೆಗಳ ಒಳಗೆ ಎಫ್‌ಐಆರ್ ದಾಖಲಿಸಲು ಸಂಸ್ಥೆಯ ಮುಖ್ಯಸ್ಥರು ಜವಾಬ್ದಾರರಾಗಿರುತ್ತಾರೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ನಿರ್ದೇಶಿಸಿದೆ. ಈ ಸಂಬಂಧ ಕೇಂದ್ರ ಸರ್ಕಾರಿ ಆಸ್ಪತ್ರೆಗಳು ಮತ್ತು ವೈದ್ಯಕೀಯ ಕಾಲೇಜುಗಳ ಮುಖ್ಯಸ್ಥರಿಗೆ ಆರೋಗ್ಯ ಸೇವೆಗಳ ಮಹಾನಿರ್ದೇಶಕ ಅತುಲ್ ಗೋಯೆಲ್ ಪತ್ರ ಬರೆದಿದ್ದಾರೆ. ಇತ್ತೀಚೆಗೆ ಕೋಲ್ಕತ್ತಾದಲ್ಲಿ ಕರ್ತವ್ಯನಿರತ ವೈದ್ಯೆಯ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ಹತ್ಯೆ ಘಟನೆ ಸಂಬಂಧ ವೈದ್ಯರ ಪ್ರತಿಭಟನೆಯ ಹಿನ್ನೆಲೆಯಲ್ಲಿ ಈ ನಿರ್ದೇಶನ ನೀಡಿದೆ. ಇತ್ತೀಚೆಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ಇತರೆ ಆರೋಗ್ಯ ಸಿಬ್ಬಂದಿಗಳ ಮೇಲೆ ಹಲ್ಲೆ ನಡೆಯುತ್ತಿರುವುದು ಸಾಮಾನ್ಯವಾಗಿದೆ ಎಂದು ಅವರು ಪತ್ರದಲ್ಲಿ ಕಳವಳ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ, ಕೋಲ್ಕತ್ತಾದಲ್ಲಿ ನಡೆದ ವೈದ್ಯೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ನ್ಯಾಯ ಕೋರಿ ಭಾರತೀಯ ಚರ್ಮರೋಗ ತಜ್ಞರು, ಪಶುವೈದ್ಯರು ಮತ್ತು ಕುಷ್ಠರೋಗ ತಜ್ಞರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದ್ದಾರೆ. ಇನ್ನೊಂದೆಡೆ, ಘಟನೆಯನ್ನು ಖಂಡಿಸಿ ವಿವಿಧ ವೈದ್ಯಕೀಯ ಸಂಘಗಳು ಮುಷ್ಕರವನ್ನು ಮುಂದುವರೆಸಿದ್ದು, ಇದರಿಂದ ಹಲವು ನಗರಗಳಲ್ಲಿ ವೈದ್ಯಕೀಯ ಸೇವೆಗಳು ಸ್ಥಗಿತಗೊಂಡಿವೆ. ಪಾಟ್ನಾದಲ್ಲಿ ಇಂದು ಪಾಟ್ನಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಹಾಗೂ ನಳಂದಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ನಿವಾಸಿ ವೈದ್ಯರು ಮುಷ್ಕರ ನಡೆಸಿದರು. ಅಮೃತಸರದಲ್ಲಿ, ಸರ್ಕಾರಿ ವೈದ್ಯಕೀಯ ಕಾಲೇಜು ವೈದ್ಯರ ಸಂಘವು ಎಲ್ಲಾ ಅಗತ್ಯವಲ್ಲದ ಸೇವೆಗಳನ್ನು ಸ್ಥಗಿತಗೊಳಿಸಿದ್ದವು. ಗುರುನಾನಕ್ ದೇವ್ ಆಸ್ಪತ್ರೆಯಲ್ಲಿ ವೈದ್ಯರು ಪ್ರತಿಭಟನೆ ನಡೆಸಿದರು. ಮಹಾರಾಷ್ಟ್ರದ ವೈದ್ಯರ ಸಂಘ ಕೂಡ ಮುಷ್ಕರವನ್ನು ತೀವ್ರಗೊಳಿಸಿದೆ. ಮುಂಬೈನ ಆಜಾದ್ ಮೈದಾನದಲ್ಲಿ ಇಂದು ಸಂಜೆ ಸಂಘದಿಂದ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

<><*<><>*><>

ಬಾಂಗ್ಲಾದೇಶದಲ್ಲಿ ಹಿಂದೂಗಳು ಮತ್ತು ಅಲ್ಪಸಂಖ್ಯಾತರ ರಕ್ಷಣೆ, ಸುರಕ್ಷತೆ ಮತ್ತು ಭದ್ರತೆಯ ಭರವಸೆಯನ್ನು ಬಾಂಗ್ಲಾದೇಶ ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರ ಪ್ರೊಫೆಸರ್

ಮುಹಮ್ಮದ್ ಯೂನಸ್ ನೀಡಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಕರೆ ಮಾಡಿದ ಮುಹಮ್ಮದ್ ಯೂನಸ್, ಹಿಂದೂಗಳ ರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ. ಮಾತುಕತೆ ವೇಳೆ ಬಾಂಗ್ಲಾದೇಶದಲ್ಲಿ ಪ್ರಸ್ತುತ ಪರಿಸ್ಥಿತಿಯ ಕುರಿತು ಉಭಯ ನಾಯಕರು ಚರ್ಚೆ ನಡೆಸಿದರು. ಪ್ರಜಾಸತ್ತಾತ್ಮಕ, ಸ್ಥಿರ, ಶಾಂತಿಯುತ ಮತ್ತು ಪ್ರಗತಿಪರ ಬಾಂಗ್ಲಾದೇಶಕ್ಕೆ ಭಾರತದ ಬೆಂಬಲವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಇದೇ ವೇಳೆ ಪುನರುಚ್ಚರಿಸಿದರು.

<><*<><>*><>

ಜಮ್ಮು ಮತ್ತು ಕಾಶ್ಮೀರದಲ್ಲಿ ಸೆಪ್ಟೆಂಬರ್ ೧೮ರಿಂದ ಮೂರು ಹಂತಗಳಲ್ಲಿ ವಿಧಾನಸಭಾ ಚುನಾವಣೆ ನಡೆಯಲಿದ್ದು, ಹರ್ಯಾಣದಲ್ಲಿ ಅಕ್ಟೋಬರ್ ೧ ರಂದು ಒಂದೇ ಹಂತದಲ್ಲಿ ಚುನಾವಣೆ ನಡೆಯಲಿದೆ. ಜಮ್ಮು ಮತ್ತು ಕಾಶ್ಮೀರ ಹಾಗೂ ಹರ್ಯಾಣ ಎರಡಕ್ಕೂ ಅಕ್ಟೋಬರ್ ೪ ರಂದು ಮತ ಎಣಿಕೆ ಕಾರ್ಯ ನಡೆಯಲಿದೆ. ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಇಂದು ನವದೆಹಲಿಯಲ್ಲಿ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಮುಂದಿನ ತಿಂಗಳ ೧೮ ರಂದು ಮೊದಲ ಹಂತದ ಮತದಾನ, ೨೫ ರಂದು ಎರಡನೇ ಹಂತ ಹಾಗೂ ಮೂರನೇ ಮತ್ತು ಅಂತಿಮ ಹಂತದ ಮತದಾನವನ್ನು ಅಕ್ಟೋಬರ್ ೧ ರಂದು ನಡೆಸಲಾಗುವುದು. ೧೧ ಸಾವಿರದ ೮೦೦ಕ್ಕೂ ಹೆಚ್ಚು ಮತಗಟ್ಟೆಗಳನ್ನು ಸ್ಥಾಪಿಸಲಾಗುವುದು ಎಂದು ರಾಜೀವ್ ಕುಮಾರ್ ಮಾಹಿತಿ ನೀಡಿದರು. ೯೦ ಸದಸ್ಯರ ಸಂಖ್ಯಾಬಲದ ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಗೆ ೮೭ ಲಕ್ಷಕ್ಕೂ ಹೆಚ್ಚು ಮತದಾರರು ನಾಯಕರ ಭವಿಷ್ಯವನ್ನು ನಿರ್ಧರಿಸಲಿದ್ದಾರೆ. ಹರ್ಯಾಣದಲ್ಲಿ ಎರಡು ಕೋಟಿಗೂ ಹೆಚ್ಚು ಮತದಾರರು ವಿಧಾನಸಭಾ ಚುನಾವಣೆಯಲ್ಲಿ ಭಾಗವಹಿಸಲಿದ್ದಾರೆ. ೨೦ ಸಾವಿರ ಮತಗಟ್ಟೆಗಳನ್ನು ಸ್ಥಾಪಿಸಲಾಗುವುದು ಎಂದು ರಾಜೀವ್ ಕುಮಾರ್ ಇದೇ ವೇಳೆ ತಿಳಿಸಿದ್ದಾರೆ.

<><*<><>*><>

೨೦೨೨ರ ಸಾಲಿನ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳನ್ನು ಘೋಷಿಸಲಾಗಿದೆ. ೭೦ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಇದಾಗಿದ್ದು, ಕನ್ನಡದ ಕಾಂತಾರ ಚಿತ್ರವು ಅತ್ಯುತ್ತಮ ಮನೋರಂಜನಾ ಪ್ರಶಸ್ತಿ ಮತ್ತು ಕೆಜಿಎಫ್-೨ ಚಿತ್ರವು ಅತ್ಯುತ್ತಮ ಕನ್ನಡ ಚಲನಚಿತ್ರ ಪ್ರಶಸ್ತಿಗೆ ಭಾಜನವಾಗಿದೆ. ಇದೇ ವೇಳೆ ಅತ್ಯುತ್ತಮ ಸಾಹಸ ನಿರ್ದೇಶನ ವಲಯದಲ್ಲಿ ಕೆಜಿಎಫ್-೨ಗೆ ಪ್ರಶಸ್ತಿ ಸಂದಿದೆ. ಕಾಂತಾರ ಚಿತ್ರದ ಅದ್ಭುತ ನಟನೆಗಾಗಿ ರಿಷಬ್ ಶೆಟ್ಟಿ ಅತ್ಯುತ್ತಮ ನಟ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ತಮಿಳಿನ ತಿರುಚಿತ್ರಂಬಲಂ' ಚಿತ್ರದ ನಟನೆಗಾಗಿ ನಿತ್ಯಾ ಮೆನನ್ ಅವರಿಗೆ ಹಾಗೂ ಗುಜರಾತಿ

ಸಿನೆಮಾ ಖಚ್ ಎಕ್ಸ್‌ಪ್ರೆಸ್’ನಲ್ಲಿನ ನಟನೆಗಾಗಿ ಮಾನಸಿ ಪರೇಖ್ ಅವರಿಗೆ ಅತ್ಯುತ್ತಮ ನಟಿ ಪ್ರಶಸ್ತಿ ಲಭಿಸಿದೆ. ಆಯೆನಾಗೆ ಅತ್ಯುತ್ತಮ ಚಿತ್ರ ಪ್ರಶಸ್ತಿ ದೊರೆತಿದ್ದು, ಮುರ್ಮುರಸ್ ಆಫ್ ದಿ ಜಂಗಲ್ ಚಿತ್ರಕ್ಕೆ ಅತ್ಯುತ್ತಮ ಸಾಕ್ಷ್ಯ ಚಿತ್ರ ಪ್ರಶಸ್ತಿ ಲಭಿಸಿದೆ. ಚೊಚ್ಚಲ ನಿರ್ದೇಶನ ವಿಭಾಗದಲ್ಲಿ ಕನ್ನಡದ ಮಧ್ಯಂತರ ಚಿತ್ರದ ನಿರ್ದೇಶನಕ್ಕಾಗಿ ಬಸ್ತಿ ದಿನೇಶ್ ಶೆಣೈ ಅವರಿಗೆ ಪ್ರಶಸ್ತಿ ಲಭಿಸಿದೆ. ಫೀಚರ್ ಫಿಲ್ಮ್ ವಿಭಾಗದಲ್ಲಿ ಗುಲ್ಮೊಹರ್ ಅತ್ಯುತ್ತಮ ಹಿಂದಿ ಚಲನಚಿತ್ರ ಪ್ರಶಸ್ತಿಯನ್ನು ಪಡೆದುಕೊಂಡಿದ್ದು, ಅರಿಜಿತ್ ಸಿಂಗ್ ಅತ್ಯುತ್ತಮ ಗಾಯಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.

<><*<><>*><>

ಪ್ರಸಾರ ಭಾರತಿ ಮತ್ತು ಸಂಸದ್ ಟೆಲಿವಿಷನ್ ನಡುವೆ ಇಂದು ತಿಳಿವಳಿಕೆ ಪತ್ರಕ್ಕೆ ಸಹಿ ಹಾಕಲಾಯಿತು. ಸಂಸದ್ ಟಿವಿ ಸಿಇಒ ರಜಿತ್ ಪುನ್ಹಾನಿ ಮತ್ತು ಪ್ರಸಾರ ಭಾರತಿ ಸಿಇಒ ಗೌರವ್ ದ್ವಿವೇದಿ ಸೇರಿದಂತೆ ಎರಡೂ ಸಂಸ್ಥೆಗಳ ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ತಿಳಿವಳಿಕೆ ಪತ್ರ ವಿನಿಮಯ ಮಾಡಿಕೊಳ್ಳಲಾಯಿತು. ಈ ಒಡಂಬಡಿಕೆಯು ಸಂಪನ್ಮೂಲ ಹಂಚಿಕೆ, ಸಿಬ್ಬಂದಿಗಳ ತರಬೇತಿ ಮತ್ತು ಪರಸ್ಪರರ ಕಾರ್ಯಕ್ರಮಗಳ ಪ್ರಚಾರವನ್ನು ಸುಗಮಗೊಳಿಸಲಿದೆ. ಒಪ್ಪಂದದ ಪ್ರಕಾರ, ಪ್ರಸಾರ ಭಾರತಿ ಮತ್ತು ಸಂಸದ್ ಟೆಲಿವಿಷನ್ ವಿಶೇಷ ವ್ಯಾಪ್ತಿ, ವಿಶೇಷ ವಿಷಯ, ಸಂದರ್ಶನಗಳು, ಸಾಕ್ಷ್ಯಚಿತ್ರಗಳು, ದೃಶ್ಯ-ಶ್ರವಣ ವಿಷಯ, ಲೈವ್ ಫೀಡ್‌ಗಳು, ಆರ್ಕೈವ್‌ಗಳು ಮತ್ತು ಎರಡು ನೆಟ್‌ವರ್ಕ್‌ಗಳು ನಿರ್ಮಿಸಿದ ಇತರೆ ವಿಷಯವನ್ನು ಹಂಚಿಕೊಳ್ಳುತ್ತವೆ ಹಾಗೂ ಪ್ರಸಾರ ಮಾಡುತ್ತವೆ. ಪ್ರಸಾರ ಭಾರತಿಯು ಪಿಬಿ-ಶಬ್ದ’ ಸೌಲಭ್ಯಗಳನ್ನು ಸಂಸದ್ ಟೆಲಿವಿಷನ್‌ಗೆ ಒದಗಿಸಲಿದೆ. ಎರಡೂ ನೆಟ್‌ವರ್ಕ್‌ಗಳು ಪರಸ್ಪರ ಕಾರ್ಯಕ್ರಮಗಳನ್ನು ಪ್ರಚಾರ ಮಾಡಲು ಒಪ್ಪಿಕೊಂಡಿವೆ.

<><*<><>*><>

ಮುಂಬರುವ ಪ್ಯಾರಿಸ್ ಪ್ಯಾರಾ ಒಲಿಂಪಿಕ್ ಕ್ರೀಡಾಕೂಟದಲ್ಲಿ ೮೪ ಆಟಗಾರರ ದೊಡ್ಡ ತಂಡವು ಭಾಗವಹಿಸಲಿದೆ. ಈ ತಿಂಗಳ ೨೮ ರಿಂದ ಸೆಪ್ಟೆಂಬರ್ ೮ ರವರೆಗೆ ಪ್ಯಾರಾಲಿಂಪಿಕ್ ಕ್ರೀಡಾಕೂಟ ನಡೆಯಲಿದೆ. ಈ ಕುರಿತು ಮಾತನಾಡಿದ ಕೇಂದ್ರ ಕ್ರೀಡಾ ಸಚಿವ ಡಾ.ಮನ್ಸೂಖ್ ಮಾಂಡವೀಯಾ, ಕ್ರೀಡಾಪಟುಗಳಿಗೆ ತರಬೇತಿ ಮತ್ತು ಎಲ್ಲಾ ಸೌಲಭ್ಯಗಳನ್ನು ಸರ್ಕಾರ ಒದಗಿಸಿದೆ. ಅನೇಕ ಆಟಗಾರರು ಖೇಲೋ ಇಂಡಿಯಾ ಮೂಲಕ ಹೊರಹೊಮ್ಮಿದ್ದಾರೆ ಎಂದು ಹೇಳಿದರು. ಇದೇ ವೇಳೆ ಪ್ಯಾರಿಸ್ ಪ್ಯಾರಾಲಿಂಪಿಕ್ ಕ್ರೀಡಾಕೂಟದಲ್ಲಿ ಭಾಗವಹಿಸುತ್ತಿರುವ ಕ್ರೀಡಾಕೂಟಪಟುಗಳು ಉತ್ತಮ ಪ್ರದರ್ಶನ ನೀಡಿ ದೇಶಕ್ಕಾಗಿ ಪದಕ ಗೆಲ್ಲುವ ವಿಶ್ವಾಸವನ್ನು

ಸಚಿವರು ವ್ಯಕ್ತಪಡಿಸಿದರು. ಕಳೆದ ಬಾರಿ ಟೋಕಿಯೊದಲ್ಲಿ ನಡೆದ ಪ್ಯಾರಾಲಿಂಪಿಕ್ ಕ್ರೀಡಾಕೂಟದಲ್ಲಿ ಭಾರತದ ಆಟಗಾರರು ಉತ್ತಮ ಪ್ರದರ್ಶನ ನೀಡಿ ೧೯ ಪದಕಗಳನ್ನು ಗೆದ್ದಿದ್ದರು. ಭಾರತದ ೫೪ ಆಟಗಾರರು ಈ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದರು.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೧ ಸಾವಿರದ ೩೩೦ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೮೦ ಸಾವಿರದ ೪೩೭ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೩೯೭ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೫೪೧ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೯೫ ಪೈಸೆಯಷ್ಟಾಗಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>